225 ಶ್ರೀ ಹೆಚ್.ಡಿ.ರೇವಣ್ಣ (ಹೊಳೆನರಸೀಪುರ)
ಮಾನ್ಯ ಕಾನೂನು ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು

ಅ) ಹಾಸನ ನಗರದಲ್ಲಿ ಹೊಸದಾಗಿ ಜಿಲ್ಲಾ ಮ್ಯಾಜಿಸ್ಟ್ರೇಟ್ ಕೋರ್ಟ್ ಕಾಂಪ್ಲೆಕ್ಸ್ ಹಾಗೂ ಸಕಲೇಶಪುರ ಮತ್ತು ಆಲೂರು ತಾಲ್ಲೂಕುಗಳಲ್ಲಿ ನ್ಯಾಯಾಲಯದ ಕಟ್ಟಡಗಳನ್ನು ಪ್ರಾರಂಭಿಸಲು ಹಿಂದಿನ ಸಮ್ಮಿಶ್ರ ಸರ್ಕಾರ 2007–08ರಲ್ಲಿ ಮಂಜೂರಾತಿ ಮಾಡಿದ್ದು, 2008–09ರ ಅಪೆಂಡಿಕ್ಸ್ ಇನಿಂದ ಈ ಕಾಮಗಾರಿಯನ್ನು ಸರ್ಕಾರವು ಕೈಬಿಟ್ಟಿರುವುದು ನಿಜವೇ ಹಾಗಿದ್ದಲ್ಲಿ ಕಾರಣಗಳೇನು?

2008–09ನೇ ಸಾಲಿ ಅಪೆಂಡಿಕ್ಸ್ ಇನಿಂದ ಈಕಾಮಗಾರಿಯನ್ನು ಕೈಬಿಡಲಾಗಿದೆ.

2007–08ನೇ ಸಾಲಿನಲ್ಲಿ ಹಲವಾರು ಕಾಮಗಾರಿಗಳನ್ನು ಅಪೆಂಡಿಕ್ಸ್ ಇನಲ್ಲಿ ಹೊಸದಾಗಿ ಸೇರ್ಪಡೆಗೊಳಿಸಲಾಗಿತ್ತು. ಈ ಎಲ್ಲಾ ಕಾಮಗಾರಿಗಳನ್ನು 2008–09ನೇ ಸಾಲಿನಲ್ಲಿ ಇಲಾಖೆಗೆ ಒದಗಿಸಲಾದ ಅನುದಾನದಲ್ಲಿ ಕೈಗೆತ್ತಿಕೊಳ್ಳಲು ಸಾಧ್ಯವಾಗುತ್ತಿರಲಿಲ್ಲ, ಆದಕಾರಣ ಮುಂದುವರೆದ ಕಾಮಗಾರಿಗಳನ್ನು ಮಾತ್ರ 2008–09ನೇ ಸಾಲಿನ ಅಪೆಂಡಿಕ್–ಇನಲ್ಲಿ ಸೇರ್ಪಡೆಗೊಳಿಸಲಾಗಿದೆ, ಪ್ರಾರಂಭ ಆಗದಿರುವ ಕಾಮಗಾರಿಗಳನ್ನು ಕೈಬಿಡಲಾಗಿದೆ.

ಆ) ಮೇಲ್ಕಂಡ ಕಾಮಗಾರಿಗಳಿಗೆ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಾಧೀಶರು ಅಡಿಗಲ್ಲು ಶಂಖು ಸ್ಥಾಪನೆ ಮಾಡಿದ್ದು ನಿಜವೇ ಹಾಗಿದ್ದಲ್ಲಿ ಈ ಕಾಮಗಾರಿಯನ್ನು 2008–09ರಲ್ಲಿ ಕೈಬಿಡಲು ಕಾರಣವೇನು/

ಹೌದು ನಿಜ.

2007–08ನೇ ಸಾಲಿನಲ್ಲಿ ಹಲವಾರು ಕಾಮಗಾರಿಗಳನ್ನು ಆಪೆಂಡಿಕ್ಸ್–ಇನಲ್ಲಿ ಹೊಸದಾಗಿ ಸೇರ್ಪಡೆಗೊಳಿಸಲಾಗಿತ್ತು. ಈ ಎಲ್ಲಾ ಕಾಮಗಾರಿಗಳನ್ನು 2008–09ನೇ ಸಾಲಿನಲ್ಲಿ ಇಲಾಖೆಗೆ ಒದಗಿಸಲಾದ ಅನುದಾನದಲ್ಲಿ ಕೈಗೆತ್ತಿಗೊಳ್ಳಲು ಸಾಧ್ಯವಾಗುತ್ತಿರಲಿಲ್ಲ. ಆದಕಾರಣ ಮುಂದುವರೆದ ಕಾಮಗಾರಿಗಳನ್ನು ಮಾತ್ರ 2008–09ನೇ ಸಾಲಿನ ಅಪೆಂಡಿಕ್ಸ್–ಇನಲ್ಲಿ ಸೇರ್ಪಡೆಗೊಳಿಸಲಾಗಿದೆ. ಪ್ರಾರಂಭ ಆಗದಿರುವ ಕಾಮಗಾರಿಗಳನ್ನು ಕೈಬಿಡಲಾಗಿದೆ.

ಇ) ಈ ಕಾಮಗಾರಿಗಳನ್ನು ಕೈಗೊಳ್ಳಲು ಸರ್ಕಾರ ಕ್ರಮಕೈಗೊಳ್ಳುವುದೇ ಮಾಹಿತಿ ನೀಡುವುದು?

2009–10ನೇ ಆಯವ್ಯಯದಲ್ಲಿನ ಅಪೆಂಡಿಕ್ಸ್–ಇನಲ್ಲಿ ಸೂಕ್ತ ಅನುದಾನವನ್ನು ಕಲ್ಪಿಸುವ ಬಗ್ಗೆ ಲೋಕೋಪಯೋಗಿ ಇಲಾಖೆಗೆ ಸಲ್ಲಿಸಲಾಗಿದೆ.